# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
## ವಾರ್ಡ್ ಸಮಿತಿ ಸಭೆ ದಿನಾಂಕ: 05/03/2022ರ
## ಸಭಾ ನಡವಳಿ

ಸಕಾಅ/ಕೆಂಉವಿ/ವಾರ್ಡ್ ಕಮಿಟಿ–ಸಭೆ –16/2021–22 . ದಿನಾಂಕ: 05.03.2022

ದಿನಾಂಕ: 05/03/2022 ರಂದು ಬೆಳಿಗ್ಗೆ 11.00 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ಹಾಜರಿದ್ದವರು:

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ)· ಹಾಗೂ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ ಮಹದೇವಪುರ ವಲಯ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್–198, ಹೆಮ್ಮಿಗೆಪುರ |
| 3 | ಶ್ರೀ ರವಿಚಂದ್ರಚಾರಿ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |
| 4 | ಶ್ರೀಮತಿ ಮೋನಿಕಾ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |
| 5 | ಶ್ರೀ ಸಿ.ವಿ. ಸೂರ್ಯನಾರಾಯಣ | ಜಲ ಪರಿವೀಕ್ಷಕರು ಬೆಂಗಳೂರು ಜಲ ಮಂಡಳಿ |
| 6 | ಶ್ರೀ ಕೃಷ್ಣಾನಾಯಕ್ | ಕೆಲಸ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |



Scanned with CamScanner

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳನ್ನು ಹಾಗೂ ಸಭೆಯಲ್ಲಿ ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

❖ ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:- ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು ಹಾಗೂ ಕೋವಿಡ್-19 ವ್ಯಾಕ್ಸಿನ್ ಲಸಿಕೆಗಳನ್ನು ನೀಡುತ್ತಿರುವ ಸ್ಥಳ ವಿವರಗಳನ್ನು ಸಭೆಗೆ ತಿಳಿಸಲಾಯಿತು ಹಾಗೂ ಇತ್ತಿಗೆ ಕೋವಿಡ್‌ನ ರೂಪಾಂತರಿಯಾದ "ಓಮೈಕ್ರಾನ್" ವೈರಾಣು ಬೆಂಗಳೂರಿನಲ್ಲಿ ಪತ್ತೆಯಾಗಿದ್ದು, ಕೋವಿಡ್-19ರ ಬೂಸ್ಟರ್ ಲಸಿಕೆಯನ್ನು ಎಲ್ಲ ಹಿರಿಯ ನಾಗರೀಕರು ಪಡೆಯುವಂತೆ ಹಾಗೂ ಕೋವಿಡ್ ಸುರಕ್ಷತಾ ನಿಯಮಾವಳಿಯನ್ನು ತಪ್ಪದೇ ಪಾಲಿಸಲು ಸಭೆಯಲ್ಲಿ ಹಾಜರಿದ್ದ ಎಲ್ಲಾ ನಿವಾಸಿಗಳಿಗೆ ಹಾಗೂ ಬಡಾವಣೆಯ ಪ್ರತಿನಿಧಿಗಳಿಗೆ ತಿಳಿಸಲಾಯಿತು ಮತ್ತು ಕೋವಿಡ್ ಲಸಿಗಳ ಇದರ ಸದುಪಯೋಗ ಪಡೆಯಲು ಭಾಗವಹಿಸಿದ್ದ ಎಲ್ಲರಿಗೂ ಕೋರಲಾಯಿತು.

❖ ಘನತ್ಯಾಜ್ಯ ನಿರ್ವಹಣೆ ಬಗ್ಗೆ :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿ ರಸ್ತೆ ಗುಡಿಸುವ ಪೌರಕಾರ್ಮಿಕರ ಸಂಖ್ಯೆಯನ್ನು ಹೆಚ್ಚಿಸಬೇಕು ಮತ್ತು ಆಟೋ ಟಿಪ್ಪರ್‌ಗಳು ಸರಿಯಾದ ಸಮಯಕ್ಕೆ ಬರುತ್ತಿರುವುದಿಲ್ಲವೆಂದು ತಿಳಿಸಿರುತ್ತಾರೆ. ಈ ಬಗ್ಗೆ ವಾರ್ಡ್‌ನ ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಹೆಮ್ಮಿಗೆಪುರ ವಾರ್ಡ್‌ನ ವಿಸ್ತೀರ್ಣವು ಅಗಾಧವಾಗಿದ್ದು, ಪೌರ ಕಾರ್ಮಿಕರ ಸಂಖ್ಯೆಯಲ್ಲಿ ಕೊರತೆ ಇರುವುದರಿಂದ ಹೆಚ್ಚಿನ ಪೌರಕಾರ್ಮಿಕರನ್ನು ನಿಯೋಜಿಸಲು ಸಾಧ್ಯವಾಗಿರುವುದಿಲ್ಲವೆಂದು ಸಭೆಯಲ್ಲಿ ತಿಳಿಸಿರುತ್ತಾರೆ.

❖ ತೋಟಗಾರಿಕಾ ಇಲಾಖೆ,ರಾರಾನಗರ ವಲಯ ಬಿಬಿಎಂಪಿ :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಿಸಿಎಂಸಿ ಬಡಾವಣೆ, ಬಾಲಾಜಿ ಬಡಾವಣೆ ಮತ್ತು ಜುಡಿಷಿಯಲ್ ಲೇಔಟ್‌ನಲ್ಲಿ ಇರುವ



Scanned with CamScanner

ಉದ್ಯಾನವನಗಳನ್ನು ಸಮರ್ಪಕವಾಗಿ ನಿರ್ವಹಿಸುತ್ತಿಲ್ಲವೆಂದು ಅಲ್ಲಿನ ನಿವಾಸಿಗಳು ಸಭೆಗೆ ತಿಳಿಸಿದರು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ತೋಟಗಾರಿಕಾ ಅಧೀಕ್ಷಕರೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲು ಸಭೆಗೆ ತಿಳಿಸಿದರು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್–198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್–198, ಹೆಮ್ಮಿಗೆಪುರ

**ಪ್ರತಿಯನ್ನು:–**

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
15) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
16) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.



Scanned with CamScanner